**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1298 |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್.ಬೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 18.03.2020 |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಡತನ ರೇಖೆಗಿಂತ ಕೆಳಗೆ ವಾಸಿಸುತ್ತಿರುವ ಪರಿಶಿಷ್ಟ ಜಾತಿಯ ಕುಟುಂಬಗಳ ಸಂಖ್ಯೆ ಎಷ್ಟು; ಮತ್ತು ಸದರಿ ಕುಟುಂಬಗಳ ಆರ್ಥಿಕ ಅಭಿವೃದ್ಧಿಗಾಗಿ ಸರ್ಕಾರವು ಕೈಗೊಂಡ ಕ್ರಮಗಳೇನು; (ಜಿಲ್ಲಾವಾರು ಮಾಹಿತಿ ನೀಡುವುದು) | ಬಡತನ ರೇಖೆಯನ್ನು ನಿರ್ಧರಿಸುವ ಮಾನದಂಡಗಳ ಬಗ್ಗೆ ಅಧಿಕೃತವಾಗಿ ನಿಗದಿಪಡಿಸಿರುವುದಿಲ್ಲ. ಆದ್ದರಿಂದ, ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ನಿರ್ದಿಷ್ಟ ಮಾಹಿತಿ ಲಭ್ಯವಿರುವುದಿಲ್ಲ. ಪರಿಶಿಷ್ಟ ಜಾತಿ 21,78,501 ಕುಟುಂಬಗಳಿಗೆ ಬಿಪಿಎಲ್‌ರೇಷನ್ ಕಾರ್ಡ್‌ಗಳನ್ನು ನೀಡಿರುತ್ತಾರೆ.<br>ನಿಗದಿತ ಆದಾಯ ಮಿತಿಯ ವ್ಯಾಪ್ತಿಗೊಳಪಟ್ಟ ಪರಿಶಿಷ್ಟ ಜಾತಿಯವರ ಅಭಿವೃದ್ಧಿಗಾಗಿ ಸಮಾಜ ಕಲ್ಯಾಣ ಇಲಾಖೆ ಮತ್ತು ಇತರೆ ಅಭಿವೃದ್ಧಿ ಇಲಾಖೆಗಳಿಂದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>ರಾಜ್ಯದಲ್ಲಿ ಪರಿಶಿಷ್ಟ ಜಾತಿಯ ಕುಟುಂಬಗಳ ಸಮಗ್ರ ಅಭಿವೃದ್ಧಿಗಾಗಿ ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ ಅಧಿನಿಯಮ 2013 ರನ್ನು ಜಾರಿಗೆ ತಂದಿದ್ದು, ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಉಪ ಯೋಜನೆಯಡಿಯಲ್ಲಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. 2019-20ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯವರ ಅಭಿವೃದ್ಧಿಗಾಗಿ ಎಸ್.ಸಿ.ಎಸ್.ಪಿ.ಯಡಿಯಲ್ಲಿ ರೂ.19,542 ಕೋಟಿಗಳನ್ನು ಒದಗಿಸಲಾಗಿದೆ. |
| ಆ) | ಹಾಗಿದ್ದಲ್ಲಿ, ಸದರಿ ಕುಟುಂಬಗಳ ಆರ್ಥಿಕ ಪ್ರಗತಿಯ ಶ್ರೇಣಿ ಎಷ್ಟು; ಸೂಕ್ತ ಬಡ ಕುಟುಂಬಗಳಿಗೆ ಸರ್ಕಾರದ ವತಿಯಿಂದ ಯೋಜನೆಗಳು ನ್ಯಾಯಯುತವಾಗಿ ತಲುಪಿದೆಯೇ;<br>ಸೇ., | |
| ಇ) | ಬಡತನ ರೇಖೆಯನ್ನು ಅಳೆಯಲು ಸರ್ಕಾರವು ಕೈಗೊಳ್ಳುವ ಮಾನದಂಡಗಳೇನು; ಬಡತನ ರೇಖೆಯನ್ನು ಗುರುತಿಸಿದ ನಂತರ ಸದರಿ ಕುಟುಂಬಗಳಿಗೆ ಎಷ್ಟು ಅವಧಿಯಲ್ಲಿ ಯೋಜನೆಗಳು ತಲುಪುತ್ತವೆ; ಈ ಯೋಜನೆಯನ್ನು ತಲುಪಿಸುವಲ್ಲಿ ತಡವಾಗದೇ ಇರುವ ಹಾಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಬಡತನ ರೇಖೆಯನ್ನು ಅಳೆಯಲು ನಿರ್ದಿಷ್ಟ ಮಾನದಂಡಗಳನ್ನು ನಿಗದಿಪಡಿಸಿರುವುದಿಲ್ಲ. |

..2

| | | |
|---|---|---|
| ಈ) | ಮಹಿಳಾ ಫಲಾನುಭವಿಗಳು ಹಾಗೂ ವಿಕಲಚೇತನರಿಗೆ ಸರಿಯಾದ ಸಮಯಕ್ಕೆ ಮತ್ತು ಅತೀ ಬೇಗ ಯೋಜನೆಗಳು ತಲುಪುತ್ತಿವೆಯೇ; ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು; ಹಾಗಿದ್ದಲ್ಲಿ ಪ್ರಗತಿ ಪ್ರಮಾಣ ಎಷ್ಟು? | ಪರಿಶಿಷ್ಟ ಜಾತಿಯ ಮಹಿಳೆಯರ ವಿಕಲಚೇತನರ ಅಭಿವೃದ್ಧಿಗಾಗಿ ಎಸ್.ಸಿ.ಎಸ್.ಪಿ ಉಪ ಯೋಜನೆಯಡಿಯಲ್ಲಿ ರೂ.962.49 ಕೋಟಿಗಳನ್ನು 2019-20ನೇ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಹಂಚಿಕೆ ಮಾಡಲಾಗಿದ್ದು, ಕಾರ್ಯಕ್ರಮಗಳನ್ನು ಅನುಷ್ಠಾನಗೊಳಸಲಾಗುತ್ತಿದೆ. ಫೆಬ್ರವರಿ-2020 ಅಂತ್ಯಕ್ಕೆ ರೂ.547.47 ಕೋಟಿಗಳನ್ನು ವೆಚ್ಚ ಮಾಡಲಾಗಿದೆ. |

ಸಂಖ್ಯೆ: ಸಕಇ 113 ಸಮನ್ವಯ 2020

(ಗೋವಿಂದ ಎಂ ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ
ಹಾಗೂ ಸಮಾಜಕಲ್ಯಾಣ ಸಚಿವರು